# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ವೆಂಕಟರಮಣಪ್ಪ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಚಿಕ್ಕಬಳ್ಳಾಪುರ ಇವರ ವಿರುದ್ಧ ಇಲಾಖಾ ವಿಚಾರಣೆ ಬಗ್ಗೆ.

ಓದಲಾಗಿದೆ:- ಉಪ ನಿಬಂಧಕರು, ವಿಚಾರಣೆಗಳು-1. ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ. ಕಂಪ್ಲೆಂಟ್ /ಉಪಲೋಕ್ /ಬಿಡಿ/336/2013/ ಡಿಆರ್‌ಇ-1 ದಿನಾಂಕ 20-08-2013.

-----

ಪ್ರಸ್ತಾವನೆ

ಉಪ ನಿಬಂಧಕರು ವಿಚಾರಣೆಗಳು-1, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರು ಮೇಲೆ ಓದಲಾದ ದಿನಾಂಕ 20-08-2013ರ ಪತ್ರದಲ್ಲಿ ಶ್ರೀ ವೆಂಕಟರಮಣಪ್ಪ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಚಿಕ್ಕಬಳ್ಳಾಪುರ ಇವರ ವಿರುದ್ಧ ಕರ್ನಾಟಕ ಉಪ ಲೋಕಾಯುಕ್ತ ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರನ್ವಯ ನೀಡಿರುವ ವರದಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕಳುಹಿಸುತ್ತಾ, ಮಾನ್ಯ ಉಪ ಲೋಕಾಯುಕ್ತರವರ ಶಿಫಾರಸ್ಸಿನಂತೆ ಕ್ರಮವಹಿಸುವಂತೆ ಹಾಗೂ ಕೈಗೊಂಡ ಕ್ರಮದ ಬಗ್ಗೆ ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 12 (4)ರನ್ವಯ ಲೋಕಾಯುಕ್ತ ಸಂಸ್ಥೆಗೆ ವರದಿ ಮಾಡಬೇಕೆಂದು ಕೋರಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರಡಿಯಲ್ಲಿ ಸಲ್ಲಿಸಿರುವ ದಿನಾಂಕ 08-08-2013 ಸಂಖ್ಯೆ **Compt/Uplok/BD-336/ 2013/DRE-1** ರ ವರದಿಯಲ್ಲಿ ಎಲ್ಲೋಡು ಗ್ರಾಮದ ಪರಿಶಿಷ್ಟ ಪಂಗಡದ ಕಾಲೋನಿಯಲ್ಲಿ ಎರಡು ರಸ್ತೆಗಳನ್ನು ನಿರ್ಮಾಣ ಮಾಡುವ ಸಂಬಂಧ ಅಂದಾಜು ಪಟ್ಟಿ ತಯಾರಿಸಲು ಶ್ರೀ ವೆಂಕಟರಮಣಪ್ಪ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಚಿಕ್ಕಬಳ್ಳಾಪುರ ಇವರು ಶ್ರೀ ವೈ.ಎನ್.ಬೈಯ್ಯಪ್ಪ ಬಿನ್ ನ್ಯಾತಪ್ಪ, 3ನೇ ದರ್ಜೆ ಗುತ್ತಿಗೆದಾರರು ಚಿಕ್ಕಬಳ್ಳಾಪುರ ಇವರಿಂದ 30,000/- ರೂ.ಗಳು ಅಕ್ರಮ ಸಂಭಾವನೆಯನ್ನು ನೀಡುವಂತೆ ಒತ್ತಾಯಿಸಿದ್ದು, ಸದರಿ ಗುತ್ತಿಗೆದಾರರು ಅಕ್ರಮ ಸಂಭಾವನೆ ನೀಡಲು ತಯಾರಿಲ್ಲದೆ ಚಿಕ್ಕಬಳ್ಳಾಪುರ ಲೋಕಾಯುಕ್ತ ಪೋಲೀಸ್‌ಠಾಣೆಗೆ ನೀಡಿದ್ದ ದೂರಿನ ಮೇರೆಗೆ ಮೊಕದ್ದಮೆ ಸಂಖ್ಯೆ 03/2012 ಕಲಂ:7, 13(1) (ಡಿ) ರೆ/ವಿ 13(2) ಲಂಚ ನಿರೋಧ ಕಾಯ್ದೆ 1988 ರೀತ್ಯಾ ಪ್ರಕರಣವನ್ನು ದಾಖಲಿಸಿಕೊಂಡಿರುತ್ತಾರೆ.

ನಂತರ ದಿನಾಂಕ 5-3-2012ರಂದು ಸದರಿ ನೌಕರರು ರೂ. 20,000/- ಗಳನ್ನು ಅಕ್ರಮ ಸಂಭಾವನೆಗೆ ಒತ್ತಾಯ ಮಾಡಿದ್ದು, ಆ ಸಂದರ್ಭದಲ್ಲಿ ಗುತ್ತಿಗೆದಾರರು 10,000/-ಗಳು ಕೊಡುವುದಾಗಿ ತಿಳಿಸಿದರೂ ಸಹ ಅವರು ಅದಕ್ಕೆ ಒಪ್ಪದೆ ರೂ. 18,000/- ಗಳನ್ನು ನೀಡುವಂತೆ ಒತ್ತಾಯಿಸಲಾಗಿತ್ತು. ಸದರಿ ಮೊತ್ತವನ್ನು ನೀಡಲು ಗುತ್ತಿಗೆದಾರರು ಒಪ್ಪಿ ಬ್ಯಾಂಕಿನಿಂದ ಹಣ ಡ್ರಾ ಮಾಡಿಕೊಂಡು ತಂದು ಕೊಡುವುದಾಗಿ ತಿಳಿಸಿ ಮಾರನೇ ದಿನ ಆರೋಪಿತ ನೌಕರರಿಗೆ ರೂ. 18,000/- ಗಳನ್ನು ನೀಡುವಾಗಿ ಪೋಲೀಸ್ ಇನ್ಸ್‌ಪೆಕ್ಟರ್ ಕರ್ನಾಟಕ ಲೋಕಾಯುಕ್ತ, ಚಿಕ್ಕಬಳ್ಳಾಪುರ ಇವರು ಟ್ರ್ಯಾಪ್ ಮಾಡಿ ಸದರಿ ಮೊತ್ತವನ್ನು ಮುಟ್ಟುಗೋಲು ಹಾಕಿಕೊಂಡಿರುತ್ತಾರೆ. ಪೋಲೀಸ್ ಇನ್ಸ್‌ಪೆಕ್ಟರ್ ಕರ್ನಾಟಕ ಲೋಕಾಯುಕ್ತ, ಚಿಕ್ಕಬಳ್ಳಾಪುರ ಇವರು ಕೈಗೊಂಡ ತನಿಖೆಯಲ್ಲಿ ಶ್ರೀ ವೆಂಕಟರಮಣಪ್ಪ, ಕಿರಿಯ ಇಂಜಿನಿಯರ್, ಪಂಚಾಯತ್

----2

ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಚಿಕ್ಕಬಳ್ಳಾಪುರ ಇವರು ಅಪರಾಧವೆಸಗಿರುವುದು ಧೃಢಪಟ್ಟಿರುವುದರಿಂದ ಸದರಿ ಆಪಾದಿತ ನೌಕರರ ವಿರುದ್ಧ ಇಲಾಖಾ ವಿಚಾರಣೆ ಕೈಗೊಳ್ಳಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14 (ಎ) ರನ್ವಯ ಪ್ರಕರಣವನ್ನು ಉಪ ಲೋಕಾಯುಕ್ತ-2 ರವರಿಗೆ ವಹಿಸಬೇಕೆಂದು ಶಿಫಾರಸ್ಸು ಮಾಡಿರುತ್ತಾರೆ.

ಮಾನ್ಯ ಕರ್ನಾಟಕ ಉಪ ಲೋಕಾಯುಕ್ತರು ತಮ್ಮ ವರದಿಯಲ್ಲಿ ಶ್ರೀ ವೈ.ಎನ್.ಬೈಯ್ಯಪ್ಪ ಬಿನ್ ನ್ಯಾತಪ್ಪ, 3ನೇ ದರ್ಜೆ ಗುತ್ತಿಗೆದಾರರು ಚಿಕ್ಕಬಳ್ಳಾಪುರ ಇವರಿಂದ ರೂ. 18,000/- ಗಳನ್ನು ಶ್ರೀ ವೆಂಕಟರಮಣಪ್ಪ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಚಿಕ್ಕಬಳ್ಳಾಪುರ ಇವರು ಪಡೆಯುವಾಗ ಪೋಲೀಸ್ ಇನ್ಸ್‌ಪೆಕ್ಟರ್ ಕರ್ನಾಟಕ ಲೋಕಾಯುಕ್ತ, ಚಿಕ್ಕಬಳ್ಳಾಪುರ ಇವರಿಂದ ಟ್ರ್ಯಾಪ್ ಒಳಗಾಗಿರುವುದು ಕಂಡುಬಂದಿದೆ ಎಂದು ವರದಿ ಮಾಡಿರುವ ಹಿನ್ನೆಲೆಯಲ್ಲಿ, ಸದರಿ ಆಪಾದಿತ ಅಧಿಕಾರಿ / ನೌಕರರ ವಿರುದ್ಧ ಇಲಾಖಾ ವಿಚಾರಣೆ ಜರುಗಿಸಲು ಪ್ರಕರಣವನ್ನು ಕರ್ನಾಟಕ ಉಪ ಲೋಕಾಯುಕ್ತ ರವರಿಗೆ ವಹಿಸಲು ಸರ್ಕಾರವು ನಿರ್ಧರಿಸಿ, ಈ ಮುಂದಿನಂತೆ ಆದೇಶಿಸಿದೆ.

ಆದೇಶ ಸಂಖ್ಯೆ ಗ್ರಾಅಪ 22 ಇಎನ್‌ಕ್ಯೂ 2013 ಬೆಂಗಳೂರು ದಿನಾಂಕ 20-09-2013

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಶ್ರೀ ವೆಂಕಟರಮಣಪ್ಪ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಚಿಕ್ಕಬಳ್ಳಾಪುರ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14-ಎ ರ ಪ್ರಕಾರ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಮಾನ್ಯ ಕರ್ನಾಟಕ ಉಪ ಲೋಕಾಯುಕ್ತರವರಿಗೆ ವಹಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಹೆಚ್.ಸಿ.ರಾಜಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ
ಸಂಕಲನಕಾರರು,ಕರ್ನಾಟಕ ರಾಜ್ಯಪತ್ರ, ಬೆಂಗಳೂರು.

ಪ್ರತಿ;
1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪ ಲೋಕಾಯುಕ, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಉಪ ನಿಬಂಧಕರು ವಿಚಾರಣೆಗಳು-1, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು [ಮುಖ ಪತ್ರದೊಂದಿಗೆ]
4. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ / ಜಲಸಂಪನ್ಮೂಲ ಇಲಾಖೆ.
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
6. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
7. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ.
9. ಶ್ರೀ ವೆಂಕಟರಮಣಪ್ಪ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಚಿಕ್ಕಬಳ್ಳಾಪುರ
10. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
11. ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು - ಸಿ).
12. ಗಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್) / ಅಪರ ಕಾರ್ಯದರ್ಶಿ ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
13. [illegible]